ಅ) ಹಾಗಿದ್ದಲ್ಲಿ, ಈ ಯೋಜನೆಯ ಒಟ್ಟು ದೂರ ಹಾಗೂ ಅಂದಾಜು ವೆಚ್ಚ ಎಷ್ಟು;

ಇ) ಈ ಕಾಮಗಾರಿಯನ್ನು ಯಾವಾಗ ಆರಂಭಿಸಲಾಗುವುದು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು)

ಅ) ಹೌದು.

ಆ) ವ್ಯಾಪಕಾಭಿವೃದ್ಧಿ ಯೋಜನೆಯ ಪ್ರಕಾರ, ಈ ಪೆರಿಫೆರಲ್ ರಸ್ತೆಯ ಒಟ್ಟು ಉದ್ದ ಸುಮಾರು 120 ಕಿ.ಮೀ. ಆಗುತ್ತದೆ. ವೆಚ್ಚವನ್ನು ಇನ್ನೂ ಅಂದಾಜು ಮಾಡಿರುವುದಿಲ್ಲ.

ಇ) ವಿವರವಾದ ಸರ್ವೆಯನ್ನು ನಡೆಸಿದ ನಂತರ ತೀರ್ಮಾನವನ್ನು ತೆಗೆದುಕೊಳ್ಳಲಾಗುವುದು.

ಬೆಂಗಳೂರು ಗಾಂಧಿನಗರದಲ್ಲಿರುವ ಕೇಂದ್ರ ಕಾರಾಗೃಹದಲ್ಲಿ ಮಕ್ಕಳ ಉದ್ಯಾನವನ ನಿರ್ಮಾಣ

786(886) ಶ್ರೀ ದಿನೇಶ್ ಗುಂಡೂರಾವ್ (ಗಾಂಧಿನಗರ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ಗಾಂಧಿನಗರದಲ್ಲಿರುವ ಕೇಂದ್ರ ಕಾರಾಗೃಹವನ್ನು ಉದ್ಯಾನವನ ನಿರ್ಮಾಣಕ್ಕಾಗಿ ಬೆಂಗಳೂರು ಮಹಾನಗರ ಪಾಲಿಕೆಗೆ ವಹಿಸಿರುವುದು ನಿಜವೇ;

ಆ) ಈ ಕಾರಾಗೃಹ ಪ್ರದೇಶದಲ್ಲಿ ಬೆಂಗಳೂರು ಮಹಾನಗರ ಪಾಲಿಕೆ ಮಕ್ಕಳ ಉದ್ಯಾನವನ ನಿರ್ಮಾಣ ಮಾಡಲು ಸರ್ಕಾರ ತೀರ್ಮಾನಿಸಿದೆಯೇ?

ಇ) ಈ ಉದ್ಯಾನವನ ನಿರ್ಮಾಣಕ್ಕಾಗಿ ಮುಂಬರುವ ಆಯವ್ಯಯದಲ್ಲಿ ಹಣವನ್ನು ನಿಗದಿಪಡಿಸಲಾಗುವುದೇ?

ಈ) ಹಾಗಿದ್ದಲ್ಲಿ ಈ ಉದ್ಯಾನವನ ನಿರ್ಮಾಣ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು)

ಅ) ಹೌದು.

ಸರ್ಕಾರದ ಆದೇಶ ಸಂ. ಕೈತೋಇ 37 ತೋಇವಿ 2003, ದಿನಾಂಕ: 11.2.2003ರ ಮೇರೆಗೆ ಕೇಂದ್ರ ಕಾರಾಗೃಹವನ್ನು ಉದ್ಯಾನವನವನ್ನಾಗಿ ಅಭಿವೃದ್ಧಿಪಡಿಸಿ ನಿರ್ವಹಣೆ ಮಾಡಲು ಬೆಂಗಳೂರು ಮಹಾನಗರ ಪಾಲಿಕೆಗೆ ಲೀಸ್ ಮುಖಾಂತರ ವಹಿಸಲಾಗಿದೆ.

ಆ) ಈ ಪ್ರದೇಶವನ್ನು ಉದ್ಯಾನವನವನ್ನಾಗಿ ಅಭಿವೃದ್ಧಿಪಡಿಸಲು ಒಂದು ಸಮಿತಿಯನ್ನು ರಚಿಸಲಾಗಿದೆ. ಮಕ್ಕಳ ಉದ್ಯಾನವನವನ್ನು ನಿರ್ಮಿಸುವ ಬಗ್ಗೆ ಯಾವುದೇ ತೀರ್ಮಾನವನ್ನು ತೆಗೆದುಕೊಂಡಿಲ್ಲ.

ಇ) ಈ ಉದ್ಯಾನವನದ ನಿರ್ಮಾಣಕ್ಕಾಗಿ ಅವಶ್ಯವಿರುವ ಹಣವನ್ನು ಮುಂಬರುವ ಆಯವ್ಯಯದಲ್ಲಿ ಕಾಯ್ದಿರಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು.

ಈ) ಈ ಉದ್ಯಾನವನ ನಿರ್ಮಾಣ ಕಾರ್ಯವನ್ನು ಈ ವರ್ಷದಲ್ಲಿ ಪ್ರಾರಂಭಿಸಲಾಗುವುದು.

ಬೆಂಗಳೂರು ನಗರಕ್ಕೆ ಮೆಟ್ರೋ ರೈಲು ಯೋಜನೆ

787(888) ಶ್ರೀ ದಿನೇಶ್ ಗುಂಡೂರಾವ್ (ಗಾಂಧಿನಗರ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?